**ಸಾಕ್ಷಿಗೆ ದಿನಾಂಕ:29-07-2026 ರಂದು ಪುನಃ ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**:: ಮುಂದುವರೆದ ಪಾಟೀ ಸವಾಲು :: 1 ನೇ ಪ್ರತಿವಾದಿ ಪರ ಶ್ರೀ.KNV ವಕೀಲರಿಂದ ::**

ನಿಪಿ13 ರಿಂದ 15 ದಾಖಲಾತಿಗಳು ಹಿಂದೆ ಬೆಂಗಳೂರಿನ land grabbing special court ಗೆ ಸಂಬಂಧಪಟ್ಟ ದಾಖಲೆ ಆಗಿರುತ್ತವೆ ಎಂದರೆ ಸರಿ. ನಿಪಿ15 ರಲ್ಲಿ 2 ನೇ ಪ್ರತಿವಾದಿಯೇ ಸರ್ವೇ ನಂಬರ್ 25 ರಲ್ಲಿ 4 ಎಕರೆ ಸ್ವತ್ತಿನ ಸ್ವಾಧೀನದಲ್ಲಿ ಇರುವುದಾಗಿ ಕಂಡು ಬರುತ್ತದೆ ಎಂದರೆ ಸರಿಯಲ್ಲ. ನಿಪಿ13 ರ ಸ್ವತ್ತಿನ ಚೆಕ್ಕುಬಂದಿಗೂ ಹಾಗೂ ದಾವಾ ಶೆಡ್ಯೂಲ್ ಸ್ವತ್ತಿನ ಚೆಕ್ಕುಬಂದಿಗೂ ವ್ಯತ್ಯಾಸ ಇರುತ್ತದೆ ಎಂದರೆ ಸರಿಯಲ್ಲ. ನಿಪಿ4 ರಂತೆ ನಾನು ಮಂಜೂರಾತಿ ಕೋರಿ ಸಲ್ಲಿಸಿದ ಅರ್ಜಿಯು ವಜಾ ಆಗಿರುತ್ತದೆ ಎಂದರೆ ಸರಿಯಲ್ಲ. ನಿಪಿ16 ರಲ್ಲೂ ಸಹ ಪ್ರತಿವಾದಿಗಳೇ ಸರ್ವೇ ನಂಬರ್ 25 ರಲ್ಲಿ ಸ್ವಾಧೀನ ಇರುವ ಬಗ್ಗೆ ಕಂಡು ಬರುತ್ತದೆ ಎಂದರೆ ಸರಿಯಲ್ಲ. ಅಸಲು ದಾವಾ 336/2012 ಗೆ ಸಂಬಂಧಪಟ್ಟ land grabbing special court ನ ತೀರ್ಪನ್ನು ಇವರೆಗೂ ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ16 ರ ಬಗ್ಗೆ ನಾನು ತಿಳಿದುಕೊಂಡಿರುತ್ತೇನೆ. ನಿಪಿ16 ರಲ್ಲಿ ನಾನು ದಾವಾ ಶೆಡ್ಯೂಲ್ ಸ್ವತ್ತಿನಲ್ಲಿ ಸ್ವಾಧೀನದಲ್ಲಿ ಇರುವ ಬಗ್ಗೆ ಎಲ್ಲೂ ನಮೂದು ಮಾಡಿರುವುದಿಲ್ಲ ಎಂದರೆ ಸರಿಯಲ್ಲ.

ನಾನು ಹಾಜರುಪಡಿಸಿರುವ ನಿಪಿ7 ರಿಂದ 10 ಫೋಟೋಗಳಿಗೂ ಹಾಗೂ ದಾವಾ ಶೆಡ್ಯೂಲ್ ಸ್ವತ್ತಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ದಾವಾ ಶೆಡ್ಯೂಲ್ ಸ್ವತ್ತಿನ ಸ್ವಾಧೀನದಲ್ಲಿ ಇರುವುದಿಲ್ಲ ಎಂದರೆ ಸರಿಯಲ್ಲ. ಆದಕಾರಣ ನಾನು ದಾವೆಯಲ್ಲಿ ಯಾವುದೇ ಪರಿಹಾರ ಪಡೆಯಲು ಅರ್ಹಳಲ್ಲ ಎಂದರೆ ಸರಿಯಲ್ಲ. ಸುಳ್ಳು ಕತೆ ಕಟ್ಟಿ ಸುಳ್ಳು ದಾವೆಯನ್ನು ಹೂಡಿರುತ್ತೇನೆ ಎಂದರೆ ಸರಿಯಲ್ಲ. ಪ್ರತಿವಾದಿಗಳೇ ದಾವಾ ಶೆಡ್ಯೂಲ್ ಸ್ವತ್ತಿನ ಸ್ವಾಧೀನದಲ್ಲಿ ಇರುತ್ತಾರೆ ಎಂದರೆ ಸರಿಯಲ್ಲ.

**:: ಮರು ವಿಚಾರಣೆ ಇಲ್ಲ ::**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

sd/-
(ರಾಹುಲ್ ಶೆಟ್ಟಿಗಾರ್)
ಪ್ರಧಾನ ಸಿ.ಜೆ ಮತ್ತು ಜೆ.ಎಂ.ಎಫ್.ಸಿ
ತರೀಕೆರೆ.

ಸಾಕ್ಷಿಯ ಸಹಿ: